ರೈತರ ಆದಾಯ ಹೆಚ್ಚಳಕ್ಕೆ ಯೋಜನೆ ಜಾರಿ: ರಾಜ್ಯ ಕೃಷಿ ಬೆಲೆ ಆಯೋಗದ ಅಧ್ಯಕ್ಷ ಪ್ರಕಾಶ್ ಕಮ್ಮರಡಿ

# ಪ್ರಾಯೋಗಿಕ ಯೋಜನೆಗೆ ಜಿಲ್ಲೆ ಆಯ್ಕೆ

ಪ್ರಜಾವಾಣಿ ವಾರ್ತೆ

ಚಿತ್ರದುರ್ಗ: ರೈತರ ಆದಾಯ ಹೆಚ್ಚಿಸುವ ಕುರಿತ ಪ್ರಾಯೋಗಿಕ ಯೋಜನೆಗೆ ಚಿತ್ರದುರ್ಗ ಜಿಲ್ಲೆಯ ಎರಡು ಹಳ್ಳಿಗಳನ್ನು ಆಯ್ಕೆ ಮಾಡಿಕೊಳ್ಳಲಾಗುತ್ತಿದ್ದು, ಯೋಜನೆ ಮುನ್ನಡೆಸುವ ಕುರಿತು 2017ರ ಮಾರ್ಚ್ ಅಂತ್ಯಕ್ಕೆ ಕಾರ್ಯಯೋಜನೆಯನ್ನು (ರೋಡ್ ಮ್ಯಾಪ್) ಸಿದ್ಧಪಡಿಸಲಾಗುತ್ತದೆ' ಎಂದು ರಾಜ್ಯ ಕೃಷಿ ಬೆಲೆ ಆಯೋಗದ ಅಧ್ಯಕ್ಷ ಪ್ರಕಾಶ್ ಕಮ್ಮರಡಿ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ಕೃಷಿ, ತೋಟಗಾರಿಕೆ ಸೇರಿದಂತೆ ವಿವಿಧ ಇಲಾಖೆಗಳು, ಕೃಷಿ ವಿವಿ, ತೋಟಗಾರಿಕಾ ವಿವಿ ಅಧಿಕಾರಿಗಳೊಂದಿಗೆ ಪ್ರಾಯೋಗಿಕ ಯೋಜನೆ ಕುರಿತು ಚರ್ಚೆ ನಡೆಸಿದ ನಂತರ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

'ಈ ಯೋಜನೆಗೆ ಚಿತ್ರದುರ್ಗ ಜಿಲ್ಲೆಯ ಎರಡು ಹಳ್ಳಿಗಳನ್ನು ಪ್ರಾಯೋಗಿಕವಾಗಿ ಆಯ್ಕೆ ಮಾಡಿಕೊಳ್ಳುತ್ತಿದ್ದೇವೆ. ಆಯ್ಕೆಯಾದ ಹಳ್ಳಿಗಳ ಸಮಗ್ರ ಅಧ್ಯಯನ ನಡೆಸಲಾಗುತ್ತದೆ. ಸಮಗ್ರ ಕೃಷಿ ಪದ್ಧತಿ ಅಳವಡಿಕೆ ಸೇರಿದಂತೆ, ಕೃಷಿ, ತೋಟಗಾರಿಕೆ ಹಾಗೂ ವಿವಿಧ ಇಲಾಖೆಗಳ ಸಹಯೋಗ ದೊಂದಿಗೆ ಗ್ರಾಮವನ್ನು ಕಲ್ಯಾಣ ಗ್ರಾಮವನ್ನಾಗಿ ರೂಪುಗೊಳಿಸಲಾಗುತ್ತದೆ. ಈ ಕುರಿತು ಶೀಘ್ರದಲ್ಲೇ ಸಂಬಂಧಿಸಿದ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳು ಹಾಗೂ ಪರಿಣತರ ಸಭೆ ಕರೆದು, ರೂಪುರೇಷೆ ಸಿದ್ಧಗೊಳಿಸಲಾಗುತ್ತದೆ' ಎಂದು ತಿಳಿಸಿದರು.



ಚಿತ್ರದುರ್ಗದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಿದ್ದ ವಿವಿಧ ಇಲಾಖೆ ಅಧಿಕಾರಿಗಳ ಸಭೆಯಲ್ಲಿ ರಾಜ್ಯ ಕೃಷಿ ಬೆಲೆ ಆಯೋಗದ ಅಧ್ಯಕ್ಷ ಡಾ.ಪ್ರಕಾಶ್ ಕಮ್ಮರಡಿ ಮಾತನಾಡಿದರು.

'ಆಯ್ಕೆಯಾಗುವ ಗ್ರಾಮಗಳು ಕೇವಲ ಆದಾಯ ಹೆಚ್ಚಳ ಮಾತ್ರವಲ್ಲ ಅವು ಕಲ್ಯಾಣ ಗ್ರಾಮಗಳಾಗಬೇಕು ಎಂಬುದು ಯೋಜನೆ ಉದ್ದೇಶವಾಗಿದೆ. ಈ ಕಾರ್ಯಕ್ಕೆ ಶಿವಮೊಗ್ಗದ ಕೃಷಿ ವಿಶ್ವವಿದ್ಯಾಲಯ, ತೋಟಗಾರಿಕೆ ವಿಶ್ವವಿದ್ಯಾಲಯ, ಕೃಷಿ ವಿಜ್ಞಾನ ಕೇಂದ್ರ ಹಾಗೂ ಜಿಲ್ಲೆಯ ಎಲ್ಲ ಇಲಾಖೆಗಳನ್ನು ಒಟ್ಟಿಗೆ ಸೇರಿಸಿಕೊಂಡು ಮುನ್ನಡೆಯಲು ತೀರ್ಮಾನಿಸಿದೆ' ಎಂದು ಮಾಹಿತಿ ನೀಡಿದರು.

**ಸಿರಿಧಾನ್ಯಗಳ ಜಿಲ್ಲೆ:** ಸಿರಿಧಾನ್ಯಗಳ ತವರಾಗಿರುವ ಚಿತ್ರದುರ್ಗ ಜಿಲ್ಲೆಯಲ್ಲಿ ಕಳೆದ ಕೆಲವು ವರ್ಷಗಳಿಂದ ಆ ಧಾನ್ಯಗಳ ಉತ್ಪಾದನೆ ಕ್ಷೀಣಿಸಿದೆ. ಆದರೆ, ಸಿರಿಧಾನ್ಯಗಳಿಗೆ ಬೇಡಿಕೆ ಹೆಚ್ಚಾಗಿದೆ. ನವೋದ್ಯಮಗಳು ಈ ಧಾನ್ಯಗಳ ಮೌಲ್ಯವರ್ಧನೆಗೆ ಮುಂದಾಗಿವೆ. ಆರೋಗ್ಯಕ್ಕೆ ಹಿತವಾದ, ಬರಸಹಿಷ್ಣು ಬೆಳೆಯಾಗಿರುವ ಸಿರಿಧಾನ್ಯಗಳ ಉತ್ಪಾದನೆ ಹೆಚ್ಚಿಸಲು ಚಿತ್ರದುರ್ಗ ಜಿಲ್ಲೆಯನ್ನು ಸಿರಿಧಾನ್ಯಗಳ ಜಿಲ್ಲೆಯನ್ನಾಗಿ ಪರಿವರ್ತಿಸಲು ನಿರ್ಧರಿಸಲಾಗಿದೆ. ಈ ಯೋಜನೆಯನ್ನು ರೈತರ ಆದಾಯ ಹೆಚ್ಚಿಸುವ ಯೋಜನೆಗೆ ಕೊಂಡಿಯಾಗಿಸಿ, ರೈತರ ಆರೋಗ್ಯ, ಆದಾಯ ಹೆಚ್ಚಿಸಲು ಬಳಕೆ ಮಾಡಲಾಗುತ್ತದೆ' ಎಂದು ಪ್ರಕಾಶ್ ಕಮ್ಮರಡಿ ತಿಳಿಸಿದರು.

ಸಿರಿಧಾನ್ಯಗಳ ಉತ್ತೇಜನದ ಜವಾಬ್ದಾರಿಯನ್ನು ಜಿಲ್ಲೆಯ ಕೃಷಿ ಇಲಾಖೆ ಜಂಟಿ ನಿರ್ದೇಶಕರಿಗೆ ವಹಿಸಲಾಗಿದೆ. ಇವರಿಗೆ ಕೃಷಿ ವಿಜ್ಞಾನ ಕೇಂದ್ರಗಳು ಮತ್ತು ಕೃಷಿ ವಿಶ್ವ ವಿದ್ಯಾಲಯಗಳು ಪೂರಕ ಮಾಹಿತಿಯನ್ನು ಒದಗಿಸಲಿವೆ. ಜತೆಗೆ, ಯಾವ ರೀತಿ ಸಿರಿಧಾನ್ಯಗಳ ಉತ್ಪಾದನೆ ಹೆಚ್ಚಿಸಬಹುದು. ಮೌಲ್ಯವರ್ಧನೆ ಮಾಡುವ ಬಗ್ಗೆ ಸಂಸ್ಥೆಗಳು ಯೋಚಿಸಿ, ಸಲಹೆ ನೀಡಬೇಕು ಎಂದು ತಿಳಿಸಲಾಗಿದೆ' ಎಂದು ವಿವರಿಸಿದರು.

**ಈರುಳ್ಳಿ ಸಮಸ್ಯೆಗೆ ಸಮಿತಿ:** ಜಿಲ್ಲೆಯಲ್ಲಿ ಸೆಪ್ಟೆಂಬರ್ ವೇಳೆಗೆ ಈರುಳ್ಳಿ ಕೊಯ್ಲಿಗೆ ಬರುತ್ತದೆ. ಕಳೆದ ವರ್ಷ ಈರುಳ್ಳಿ ಸಮಸ್ಯೆ ಉದ್ಭವವಾದ ಹಿನ್ನಲೆಯಲ್ಲಿ ಸಮಸ್ಯೆ ಅಧ್ಯಯನಕ್ಕಾಗಿ ಬಾಗಲಕೋಟೆ ತೋಟಗಾರಿಕಾ ವಿಶ್ವವಿದ್ಯಾಲಯದ ಸಂಶೋಧನಾ ನಿರ್ದೇಶಕರ ನೇತೃತ್ವದಲ್ಲಿ ಸಮಿತಿ ರಚಿಸಲಾಗಿತ್ತು. ಈಗ ಆ ಸಮಿತಿ ವರದಿ ಸಿದ್ಧಪಡಿಸಿದೆ. ಜಿಲ್ಲೆಯ ತೋಟಗಾರಿಕೆ ಇಲಾಖೆ ಅಧಿಕಾರಿಗಳು ಆ ವರದಿಯನ್ನು ಪಡೆದುಕೊಂಡು, ಈರುಳ್ಳಿ ಬೆಳೆಗಾರರಿಗೆ ಉಂಟಾಗುವ ಸಮಸ್ಯೆಯನ್ನು ತಡೆಯುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಬೇಕು ಎಂದು ಸೂಚಿಸಲಾಗಿದೆ' ಎಂದು ಪ್ರಕಾಶ್ ಕಮ್ಮರಡಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಪಂಚಾಯ್ತಿ ಸಿಇಒ ನಿತೇಶ್ ಪಾಟೀಲ್ ಹಾಜರಿದ್ದರು.

## 'ಮಹಾಮಂಡಳ ಸ್ಥಾಪನೆಗೆ ಪ್ರಸ್ತಾವ'

ರಾಜ್ಯ ಕೃಷಿ ಬೆಲೆ ಆಯೋಗ ರಾಜ್ಯ ಮಟ್ಟದಲ್ಲಿ ಕೆಲ ಯೋಜನೆಗಳನ್ನು ರೂಪಿಸಿದೆ. ಮೊದಲನೆಯದಾಗಿ ಈ ವರ್ಷ ಅಂತರರಾಷ್ಟ್ರೀಯ ದ್ವಿದಳಧಾನ್ಯ ವರ್ಷ ಎಂದು ವಿಶ್ವಸಂಸ್ಥೆ ಘೋಷಿಸಿದೆ. ಈ ಹಿನ್ನೆಲೆಯಲ್ಲಿ ದ್ವಿದಳ ಧಾನ್ಯಗಳಿಗೆ ಪ್ರತ್ಯೇಕ ಮಿಷನ್ ಸ್ಥಾಪಿಸಬೇಕು. ದ್ವಿದಳ ಧಾನ್ಯ ಉತ್ಪಾದಕರು ಮತ್ತು ಗ್ರಾಹಕರನ್ನು ರಕ್ಷಿಸುವ ನಿಟ್ಟಿನಲ್ಲಿ ದ್ವಿದಳ ಧಾನ್ಯ ಉತ್ಪಾದಕರನ್ನು ಸಂಘಟಿಸಿ, ದ್ವಿದಳ ಧಾನ್ಯ ಉತ್ಪಾದಕ ಸಂಘಟನೆಗಳ ಮಹಾಮಂಡಳ ರಚಿಸಬೇಕು. ಈಗಿರುವ ತೊಗರಿ ಮಂಡಳಿಯನ್ನು ಅದರೊಳಗೆ ವಿಲೀನಗೊಳಿಸಬೇಕು ಎಂಬ ಪ್ರಸ್ತಾವವನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆ' ಎಂದು ಪ್ರಕಾಶ್ ಕಮ್ಮರಡಿ ತಿಳಿಸಿದರು.